ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಬುಧವಾರ, ದಿನಾಂಕ : 18 ನೇ ಮಾರ್ಚ್, 2020

ಕೃಷಿ ಯಂತ್ರೋಪಕರಣಗಳನ್ನು ಬಾಡಿಗೆಗೆ ನೀಡುತ್ತಿರುವ ಬಗ್ಗೆ

ಶ್ರೀ ಕಾಂತರಾಜ್ (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

1135 (1310) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ 2019-20ನೇ ಸಾಲಿನಲ್ಲಿ ಕೃಷಿ ಯಾಂತ್ರಿಕ ಉಪಕರಣಗಳನ್ನು ಬಾಡಿಗೆ ಆಧಾರದ ಮೇಲೆ ರೈತರಿಗೆ ಒದಗಿಸಲಾಗುತ್ತಿದೆಯೇ ;

(ಆ) ಹಾಗಿದ್ದಲ್ಲಿ, ರೈತರಿಗೆ ಅನುಕೂಲವಾಗುವಂತೆ ಸದರಿ ಕೃಷಿ ಯಾಂತ್ರಿಕ ಉಪಕರಣಗಳ ಕೇಂದ್ರಗಳನ್ನು ಕೃಷಿ ಕೇಂದ್ರ ಹೋಬಳಿ, ಗ್ರಾಮ ಪಂಚಾಯಿತಿ ಸ್ಥಾನಗಳಲ್ಲಿ ತೆರೆಯಲಾಗಿದೆಯೇ ;

(ಇ) ಈ ಕೃಷಿ ಯಾಂತ್ರಿಕ ಉಪಕರಣ ಕೇಂದ್ರಗಳಲ್ಲಿ ರೈತರಿಗೆ ಯಾವ ಯಾವ ಯಾಂತ್ರಿಕ ಸಲಕರಣೆಗಳನ್ನು ಒದಗಿಸಲಾಗಿದೆ ; (ಮಾಹಿತಿ ನೀಡುವುದು)

(ಈ) ಇತ್ತೀಚಿನ ಆಧುನಿಕ ಕೃಷಿ ಯಾಂತ್ರಿಕ ಉಪಕರಣಗಳನ್ನು ರಿಯಾಯಿತಿ ದರದಲ್ಲಿ ರೈತÀರಿಗೆ ಒದಗಿಸಿ ಕೊಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಉ) ತುಮಕೂರು ಜಿಲ್ಲೆಯಲ್ಲಿ ಯಾವ ಯಾವ ಸ್ಥಳದಲ್ಲಿ ಕೃಷಿ ಯಾಂತ್ರಿಕ ಉಪಕರಣಗಳ ಕೇಂದ್ರಗಳನ್ನು ತೆರೆಯಲಾಗಿದೆ ? (ತಾಲ್ಲೂಕುವಾರು ಮಾಹಿತಿ ನೀಡುವುದು)